ಶ್ರೀ ಹೆಚ್.ಕೆ. ಪಾಟೀಲ್ (ಕಾನೂನು ಮತ್ತು ಸಂಸದೀಯ ವ್ಯವಹಾರ ಸಚಿವರು)

ಅ) ಬಂದಿದೆ.

ಆ) ತುರುವೇಕೆರೆ ಗ್ರಾಮದ ಸರ್ವೆ ನಂ 169 ರಲ್ಲಿ ಎರಡು ಎಕರೆ ಜಮೀನನ್ನು ಮಾನ್ಯ ಜಿಲ್ಲಾಧೀಕಾರಿಗಳು ತುಮಕೂರು ಇವರು ನ್ಯಾಯಾಲಯ ಕಟ್ಟಡ ನಿರ್ಮಿಸಲು ಮಂಜೂರು ಮಾಡಿರುತ್ತಾರೆ ಮೇಲ್ಕಂಡ ಕಟ್ಟಡ ಕಟ್ಟುವ ಕೆಲಸವನ್ನು ಮುಂದಿನ ಸಾಲಿನ ಅಂದರೆ 2005–06ನೇ ಸಾಲಿನ ಆಯವ್ಯಯದಲ್ಲಿ ಸೇರಿಸಲು ಕ್ರಮ ತೆಗೆದುಕೊಳ್ಳಲಾಗುವುದು.

ಇ) ಉಚ್ಚ ನ್ಯಾಯಾಲಯದಿಂದ ಪ್ರಸ್ತಾವನೆ ಬಂದ ನಂತರ 2005–06ನೇ ಸಾಲಿನ ಆಯವ್ಯಯದಲ್ಲಿ ಈ ಕಾಮಗಾರಿಯನ್ನು ಸೇರಿಸಲು ಕ್ರಮ ತೆಗೆದುಕೊಳ್ಳಲಾಗುವುದು.

268 (663) : ಶ್ರೀ ಕೃಷ್ಣಪ್ಪ ಎಂ.ಟಿ. (ತುರುವೇಕೆರೆ) ಮಾನ್ಯ ಮುಖ್ಯಮಂತ್ರಿಯವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

1. ತುರುವೇಕೆರೆ ಪಟ್ಟಣವನ್ನು ಇದುವರೆಗೂ ಒಳಚರಂಡಿ ವ್ಯವಸ್ಥೆಗೆ ಅಳವಡಿಸದಿರಲು ಕಾರಣಗಳೇನು;

2. ಈ ವ್ಯವಸ್ಥೆಯನ್ನು ಕಲ್ಪಿಸದೇ ಇರುವುದರಿಂದ ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವುದು ನಿಜವಲ್ಲವೇ;

3. ಹಾಗಿದ್ದಲ್ಲಿ, ಈ ಕಾರ್ಯವನ್ನು ಪ್ರಸಕ್ತ ಸಾಲಿನಿಂದಲೇ ಕೈಗೆತ್ತಿಕೊಂಡು ಜನರ ಸಮಸ್ಯೆಯನ್ನು ಹೋಗಲಾಡಿಸಲಾಗುವುದೇ?

ಶ್ರೀ ಎನ್. ಧರ್ಮಸಿಂಗ್ (ಮುಖ್ಯಮಂತ್ರಿಯವರು)

1. ಈ ಪಟ್ಟಣಕ್ಕೆ ಒಳಚರಂಡಿ ವ್ಯವಸ್ಥೆ ಕಲ್ಪಿಸಲು ಸರ್ವೆ ಕೆಲಸಕ್ಕಾಗಿ 3.00 ಲಕ್ಷ ರೂ.ಗಳ ಅಂದಾಜನ್ನು ಪಟ್ಟಣ ಪಂಚಾಯಿತಿಯವರಿಗೆ ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಲಿ ಸಲ್ಲಿಸಿದೆ. ಪಟ್ಟಣ ಪಂಚಾಯಿತಿಯಿಂದ ಹಣ ಬಿಡುಗಡೆಯಾದ ಕೂಡಲೇ ಒಳಚರಂಡಿ ಯೋಜನೆಯನ್ನು ರೂಪಿಸಲಾಗುವುದು.

2. ಹೌದು.

3. ಯೋಜನೆಯ ಶೇ. 20 ರಷ್ಟು ವೆಚ್ಚವನ್ನು ಪ್ರಾರಂಭಿಕವಾಗಿ ಪಟ್ಟಣ ಪಂಚಾಯಿತಿ ಭರಿಸಬೇಕಾಗಿದ್ದು, ಆ ಮೊತ್ತವನ್ನು ಜಲ ಮಂಡಳಿಯಲ್ಲಿ ಠೇವಣಿಯಿಟ್ಟ ಕೂಡಲೇ ಯೋಜನೆಯನ್ನು ಪ್ರಾರಂಭಿಸಲಾಗುವುದು.

269 (664) : ಶ್ರೀ ಕೃಷ್ಣಪ್ಪ ಎಂ.ಟಿ. (ತುರುವೇಕೆರೆ) ಮಾನ್ಯ ಜಲಸಂಪನ್ಮೂಲ ಮತ್ತು ಸಾರಿಗೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ತುರುವೇಕೆರೆ ತಾಲ್ಲೂಕಿನ ಯಾವ ಯಾವ ಸ್ಥಳಗಳಲ್ಲಿ ಚೆಕ್ ಡ್ಯಾಮ್‌ಗಳನ್ನು ನಿರ್ಮಿಸಲಾಗಿದೆ;

ಆ) ನಿರ್ಮಿಸಿದ್ದರೆ, ಇವುಗಳಿಗೆ ತಗಲಿರುವ ವೆಚ್ಚ ಎಷ್ಟು; ಸ್ಥಳವಾರು ವೆಚ್ಚದ ವಿವರಗಳನ್ನು ಒದಗಿಸುವುದು;

ಇ) ನಿರ್ಮಿಸಿರುವ ಎಲ್ಲಾ ಚೆಕ್ ಡ್ಯಾಮ್‌ಗಳು ಸುಸ್ಥಿತಿಯಲ್ಲಿ ಇವೆಯೇ?

ಶ್ರೀ ಮಲ್ಲಿಕಾರ್ಜುನ ಖರ್ಗೆ (ಜಲ ಸಂಪನ್ಮೂಲ ಮತ್ತು ಸಾರಿಗೆ ಸಚಿವರು)

ಅ) ಜಲ ಸಂಪನ್ಮೂಲ ಇಲಾಖೆ ವತಿಯಿಂದ ಯಾವುದೇ ಚೆಕ್ ಡ್ಯಾಂಗಳನ್ನು ನಿರ್ಮಿಸಿರುವುದಿಲ್ಲ.

ಆ) ಉದ್ಭವಿಸುವುದಿಲ್ಲ.

ಇ) ಉದ್ಭವಿಸುವುದಿಲ್ಲ.

270 (666) : ಶ್ರೀ ಕೃಷ್ಣಪ್ಪ ಎಂ.ಟಿ. (ತುರುವೇಕೆರೆ) ಮಾನ್ಯ ಜಲಸಂಪನ್ಮೂಲ ಮತ್ತು ಸಾರಿಗೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಶಿಂಷಾ ನದಿಗೆ ಬ್ಯಾರೇಜ್ ನಿರ್ಮಿಸುವ ಪ್ರಸ್ತಾವನೆ ಸರ್ಕಾರದ ಮುಂದೆ ಇದೆಯೇ?

ಆ) ಈ ಪ್ರಸ್ತಾವನೆಗೆ ತಗಲುವ ವೆಚ್ಚವೆಷ್ಟು?

ಇ) ಇದರ ಕಾಮಗಾರಿಯನ್ನು ಯಾವಾಗ ಕೈಗೆತ್ತಿಗೊಳ್ಳಲಾಗುವುದು

ಶ್ರೀ ಮಲ್ಲಿಕಾರ್ಜುನ ಖರ್ಗೆ (ಜಲ ಸಂಪನ್ಮೂಲ ಮತ್ತು ಸಾರಿಗೆ ಸಚಿವರು)

ಅ) ಇಲ್ಲಾ.

ಆ) ಉದ್ಭವಿಸುವುದಿಲ್ಲ.

ಇ) ಉದ್ಭವಿಸುವುದಿಲ್ಲ.

271 (668) : ಶ್ರೀ ಕೃಷ್ಣಪ್ಪ ಎಂ.ಟಿ. (ತುರುವೇಕೆರೆ) ಮಾನ್ಯ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ತುರುವೇಕೆರೆ ತಾಲ್ಲೂಕಿನಲ್ಲಿ ಅಗ್ನಿಶಾಮಕ ಠಾಣೆ ಇಲ್ಲದೆ ಸಾರ್ವಜನಿಕರಿಗೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಹಾಗಿದ್ದಲ್ಲಿ ಕೈಗೊಂಡ ಕ್ರಮಗಳೇನು?

ಇ) ಪ್ರಸಕ್ತ ಸಾಲಿನಲ್ಲಿ ನಿರ್ಮಾಣ ಮಾಡಲು ಇರುವ ತೊಂದರೆಗಳೇನು?

ಶ್ರೀ ಎನ್. ಧರ್ಮಸಿಂಗ್ (ಮುಖ್ಯಮಂತ್ರಿಗಳು)

ಅ) ಹೌದು.

ಆ) ಈಗಾಗಲೇ ತುಮಕೂರು ಜಿಲ್ಲೆಯಲ್ಲಿ 4 ಅಗ್ನಿಶಾಮಕ ಠಾಣೆಗಳು ಕಾರ್ಯ ನಿರ್ವಹಿಸುತ್ತಿದ್ದು ಉಳಿದ 2 ಮಂಜೂರಾಗಿರುವ ಅಗ್ನಿಶಾಮಕ ಠಾಣೆಯನ್ನು ಪಾವಗಡ ಹಾಗೂ ಮಧುಗಿರಿ ಪಟ್ಟಣಗಳಲ್ಲಿ ಪ್ರಾರಂಭಿಸಿದ ನಂತರ ತುರುವೇಕೆರೆಗೆ ಅಗ್ನಿಶಾಮಕ ಠಾಣೆಯನ್ನು ಮಂಜೂರು ಮಾಡಲು ಪರಿಶೀಲಿಸಲಾಗುವುದು. ಹಾಲಿ ತುರುವೇಕೆರೆ ಹಾಗೂ ಸುತ್ತಮುತ್ತಲೂ ಸಂಭವಿಸುವ ಅಗ್ನಿ ಅನಾಹುತಕ್ಕೆ ತಿಪಟೂರು ಅಗ್ನಿಶಾಮಕ ಠಾಣೆಯಿಂದ ವಾಹನಗಳನ್ನು ನಿಯೋಜಿಸಲಾಗುತ್ತಿದೆ.

ಇ) ಪ್ರತಿಯೊಂದು ಅಗ್ನಿಶಾಮಕ ಠಾಣೆಯ ನಿರ್ಮಾಣದ ಮೊದಲು ಸಿಬ್ಬಂದಿ ವಾಹನ ಹಾಗೂ ಇತರೆ ವ್ಯವಸ್ಥೆಗಳ ಅವಶ್ಯಕತೆಯಿದ್ದು ಸಾಮಾನ್ಯವಾಗಿ ಇವುಗಳನ್ನು ಒದಗಿಸಿಕೊಂಡ ನಂತರ ಠಾಣೆಯನ್ನು ನಿರ್ಮಾಣವನ್ನು ಪ್ರಾರಂಭಿಸಲು ಸಾಧ್ಯವಾಗುತ್ತದೆ.